# ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 16ನೇ ಜುಲೈ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

### 1. ಪ್ರಶ್ನೋತ್ತರ

**ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾಲ್ಕನೇ ಪಟ್ಟಿ**

ಆ) ದಿನಾಂಕ 09.07.2015ರ ಒಂಭತ್ತನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 126(1372) : ಸಾರಿಗೆ ಸಚಿವರು

ಇ) ದಿನಾಂಕ 09.07.2015ರ ಒಂಭತ್ತನೇ ಪಟ್ಟಿಯಿಂದ ತಡೆಹಿಡಿಯಲಾದ ಡಾ|| ಉಮೇಶ್ ಜಿ.ಜಾಧವ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 134(1782) : ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

**ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾಲ್ಕನೇ ಪಟ್ಟಿ**

### 2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ.ಕಾರಜೋಳ, ಆರ್.ಅಶೋಕ, ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಎಸ್.ಸುರೇಶ್‌ಕುಮಾರ್, ಸಿ.ಟಿ.ರವಿ ಹಾಗೂ ಇತರರು ರಾಜ್ಯದ ಲೋಕಾಯುಕ್ತ ಸಂಸ್ಥೆಯಲ್ಲಿನ ಭ್ರಷ್ಟಾಚಾರ ಹಾಗೂ ಇದರ ವಿರುದ್ಧ ರಾಜ್ಯಾದ್ಯಂತ ನಡೆಯುತ್ತಿರುವ ಪ್ರತಿಭಟನೆಗಳ ಬಗ್ಗೆ ನೀಡಿರುವ ಸೂಚನೆಯ ಮೇಲೆ **ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.**

**ಮು.ತಿ.ನೋ.,.**

## 3. ಅವಿಶ್ವಾಸ ನಿರ್ಣಯದ ಪ್ರಸ್ತಾವನೆ ಮೇಲೆ ಚರ್ಚೆ

ವಿಧಾನಸಭಾ ಸದಸ್ಯರು ಹಾಗೂ ಕರ್ನಾಟಕ ಜನತಾದಳ (ಜಾ) ಶಾಸಕಾಂಗ ಪಕ್ಷದ ನಾಯಕರಾದ ಶ್ರೀ ಹೆಚ್.ಡಿ.ಕುಮಾರಸ್ವಾಮಿ ಮತ್ತು ಇತರರು ನೀಡಿರುವ ಈ ಕೆಳಕಂಡ ಪ್ರಸ್ತಾವದ ಮೇಲೆ ಚರ್ಚೆ, ಉತ್ತರ ಮತ್ತು ಮತಕ್ಕೆ ಹಾಕುವುದು;

**"ಶ್ರೀ ಸಿದ್ಧರಾಮಯ್ಯ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಅವರ ಸಚಿವ ಸಂಪುಟದ ವಿರುದ್ಧ ಅವಿಶ್ವಾಸವನ್ನು ವ್ಯಕ್ತಪಡಿಸುತ್ತದೆ".**

## 4. ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ;

| **ಬೇಡಿಕೆ ಸಂಖ್ಯೆ** | **ಬೇಡಿಕೆಗಳ ಹೆಸರು** |
|---|---|
| 21 | ಜಲಸಂಪನ್ಮೂಲ |
| 03 | ಆರ್ಥಿಕ |
| 04 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ |
| 18 | ವಾಣಿಜ್ಯ ಮತ್ತು ಕೈಗಾರಿಕೆ |
| 24 | ಇಂಧನ |
| 12 | ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವೆಗಳು |
| 17 | ಶಿಕ್ಷಣ |
| 02 | ಪಶುಸಂಗೋಪನೆ ಮತ್ತು ಮೀನುಗಾರಿಕೆ |
| 27 | ಕಾನೂನು |
| 28 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ |
| 08 | ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ |
| 14 | ಕಂದಾಯ |
| 05 | ಒಳಾಡಳಿತ ಮತ್ತು ಸಾರಿಗೆ |
| 16 | ವಸತಿ |
| 19 | ನಗರಾಭಿವೃದ್ಧಿ |
| 22 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ |

**ಮು.ತಿ.ನೋ.,**

| | |
|---|---|
| 10 | ಸಮಾಜ ಕಲ್ಯಾಣ |
| 15 | ಮಾಹಿತಿ ತಂತ್ರಜ್ಞಾನ |
| 26 | ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ |
| 13 | ಆಹಾರ ಮತ್ತು ನಾಗರೀಕ ಸರಬರಾಜು |
| 06 | ಮೂಲಭೂತ ಸೌಕರ್ಯ ಅಭಿವೃದ್ಧಿ |
| 11 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ |
| 25 | ಕನ್ನಡ ಮತ್ತು ಸಂಸ್ಕೃತಿ |
| 23 | ಕಾರ್ಮಿಕ |

## 5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ಜಿಲ್ಲಾಧಿಕಾರಿಯವರಿಗೆ ವೈಯಕ್ತಿಕ ಠೇವಣಿ ಖಾತೆಯನ್ನು ಮುಂದುವರೆಸಲು ಆರ್ಥಿಕ ಇಲಾಖೆಯು ಅನುಮತಿ ನೀಡದಿರುವುದರಿಂದ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಆನೆಗಳ ಹಾವಳಿಯಿಂದ ಉಂಟಾಗುತ್ತಿರುವ ಬೆಳೆ ಹಾಗೂ ಪ್ರಾಣ ಹಾನಿ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಸ್.ಟಿ.ಸೋಮಶೇಖರ್ ಮತ್ತು ಶ್ರೀ ಬಿ.ಎ. ಬಸವರಾಜ ಅವರುಗಳು ಬನಶಂಕರಿ 6ನೇ ಹಂತದ ಹೆಮ್ಮಿಗೆಪುರ ಗ್ರಾಮದ ಸರ್ವೆ ನಂ. 64/ಪಿ ಹಾಗೂ ಅಂಗಧೀರನಹಳ್ಳಿ ಗ್ರಾಮದ ಸರ್ವೆ ನಂ.6ರ ಜಮೀನುಗಳಲ್ಲಿ ಬಿ.ಡಿ.ಎ ನಿರ್ಮಿಸಿರುವ ಬಡಾವಣೆಗಳಲ್ಲಿ ನಕಲಿ ಸಾಗುವಳಿ ಚೀಟಿ ಸೃಷ್ಟಿಸಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4. ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ ಹಲವಾರು ಗ್ರಾಮಗಳ ಕೊಳವೆ ಬಾವಿಗಳಲ್ಲಿರುವ ನೀರು ಅಪಾಯಕಾರಿ ಲವಣಾಂಶಗಳಿಂದ ಕೂಡಿರುವುದರಿಂದ ಶುದ್ಧ ನೀರಿನ ಘಟಕ ಸ್ಥಾಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

5. ಶ್ರೀ ಬಿ.ಎನ್.ವಿಜಯಕುಮಾರ್ ಅವರು ಜಯನಗರ ವಿಧಾನಸಭಾ ಕ್ಷೇತ್ರದ ಪ್ರಮುಖ ಪಾದಚಾರಿ ಮಾರ್ಗಗಳಲ್ಲಿ ಅಳವಡಿಸಿರುವ ಟ್ರಾನ್ಸ್‌ಫಾರ್ಮರ್‌ಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

6. ಶ್ರೀ ಜಿ.ಹೆಚ್. ಶ್ರೀನಿವಾಸ್ ಅವರು ಕೆಮ್ಮಣ್ಣುಗುಂಡಿ ಪ್ರವಾಸಿ ತಾಣದಲ್ಲಿರುವ ವಸತಿ ಗೃಹಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಸಂಜಯ ಬಿ. ಪಾಟೀಲ್ ಅವರು ಬೆಳಗಾವಿ ಗ್ರಾಮಾಂತರ ಕ್ಷೇತ್ರದ ಬಡಸ ಕೆ.ಹೆಚ್. 6 ಗ್ರಾಮಗಳಿಗೆ ಮಂಜೂರಾಗಿರುವ ಬಹುಗ್ರಾಮ ಕುಡಿಯುವ ನೀರು ಯೋಜನೆಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

8. ಶ್ರೀ ಎಸ್.ಆರ್. ವಿಶ್ವನಾಥ್ ಅವರು ಬೆಂಗಳೂರು ಉತ್ತರ ತಾಲ್ಲೂಕು ದಾಸನಪುರ, ಯಲಹಂಕ, ಹೆಸರಘಟ್ಟ, ಜಾಲ ಮತ್ತು ಯಶವಂತಪುರ ಹೋಬಳಿಗಳಲ್ಲಿ ತೆರವುಗೊಳಿಸಿರುವ ಒತ್ತುವರಿ ಜಮೀನುಗಳಿಗೆ ಬೇಲಿ ನಿರ್ಮಿಸದಿರುವ ಹಾಗೂ 5 ಎಕರೆಗಿಂತ ಕಡಿಮೆ ಒತ್ತುವರಿ ಮಾಡಿಕೊಂಡಿರುವವರನ್ನು ತೆರವುಗೊಳಿಸುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9. ಶ್ರೀಮತಿ ಶಾರದ ಮೋಹನ ಶೆಟ್ಟಿ ಅವರು ಕುಮಟಾ ತಾಲ್ಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಚಿಪ್ಪಿ ಗಣಿಗಾರಿಕೆ ತಡೆಗಟ್ಟುವ ಮತ್ತು ನವೀಕರಣಗೊಳಿಸುವುದನ್ನು ತಡೆಹಿಡಿಯುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10. ಶ್ರೀ ಸಿ.ಟಿ. ರವಿ ಅವರು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವು ರೇಷ್ಮೆ ನೂಲಿನ ಖರೀದಿಗಾಗಿ ಕರೆದಿದ್ದ ಇ-ಟೆಂಡರಿನಲ್ಲಿ ಅವ್ಯವಹಾರ ಎಸಗಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

11. ಶ್ರೀ ಎಂ. ಸತೀಶ್ ರೆಡ್ಡಿ ಅವರು ಬೆಂಗಳೂರಿನ ಸೋಮಸಂದ್ರ ಪಾಳ್ಯ, ಹೆಚ್.ಎಸ್.ಆರ್ ಲೇಔಟ್‌ನಲ್ಲಿರುವ ಕೆ.ಸಿ.ಡಿ.ಸಿ. ಗೊಬ್ಬರ ಕಾರ್ಖಾನೆಯಲ್ಲಿ ಬಾಲಕ ಮೃತಪಟ್ಟಿರುವ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ಮೃತರ ಕುಟುಂಬಕ್ಕೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಆರ್. ಜಗದೀಶ್ ಕುಮಾರ್ ಅವರು ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ ಕಾರ್ಯಕರ್ತರ ಗೃಹ ನಿರ್ಮಾಣ ಸಹಕಾರ ಸಂಘದ ಆಡಳಿತ ಮಂಡಳಿಯವರು ಅಕ್ರಮವಾಗಿ ನಿವೇಶನಗಳನ್ನು ಮಂಜೂರು ಮಾಡಿ ಸಂಘದ ಸದಸ್ಯರಿಗೆ ಹಾಗೂ ರೈತರಿಗೆ ವಂಚಿಸಿರುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

13. ಶ್ರೀ ಸಾ.ರಾ. ಮಹೇಶ್ ಅವರು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಾಮಧಾರಿ ಸಮಾಜದ ಜನಾಂಗಕ್ಕೆ ಪ್ರವರ್ಗ-2 ಎ ಜಾತಿ ಪ್ರಮಾಣ ಪತ್ರ ನೀಡುತ್ತಿದ್ದು, ಮೈಸೂರು ಜಿಲ್ಲೆಯಲ್ಲಿನ ಕೆ.ಆರ್.ನಗರ ತಾಲ್ಲೂಕಿನಲ್ಲಿ ಮಾತ್ರ ನೀಡದೆ ಅನ್ಯಾಯ ಮಾಡುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

**ಮು.ತಿ.ನೋ.,.**

14. ಶ್ರೀ ಬಸವರಾಜ ನೀಲಪ್ಪ ಶಿವಣ್ಣನವರ ಮತ್ತು ಶ್ರೀ ರಾಮಕೃಷ್ಣ ಸಿ. ದೊಡ್ಡಮನಿ ಅವರುಗಳು ಹಾವೇರಿ ಹಾಗೂ ಗದಗ ಜಿಲ್ಲೆಗಳಲ್ಲಿ ಮಳೆ ಬಾರದಿರುವುದರಿಂದ ಮೋಡ ಬಿತ್ತನೆ ಕಾರ್ಯ ಕೈಗೆತ್ತಿಕೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಎನ್. ಚಲುವರಾಯ ಸ್ವಾಮಿ ಅವರು 25 ವರ್ಷಗಳ ಸೇವೆಯನ್ನು ಪೂರೈಸುವ ಮೊದಲು ಹಾಗೂ ನಂತರ ಬಡ್ತಿ ಪಡೆದ ರಾಜ್ಯ ಸರ್ಕಾರಿ ನೌಕರರ ವೇತನವನ್ನು ನಿಗದಿಪಡಿಸುವಲ್ಲಿ ಉಂಟಾಗಿರುವ ತಾರತಮ್ಯವನ್ನು ಸರಿಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

16. ಶ್ರೀ ಈ. ತುಕಾರಾಂ ಅವರು ಸಂಡೂರು ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಶೇಷ ಘಟಕ/ಗಿರಿಜನ ಉಪ ಯೋಜನೆಯಡಿಯಲ್ಲಿ ಹೈನುಗಾರಿಕೆ ಚಟುವಟಿಕೆಗಾಗಿ 2014-15ನೇ ಸಾಲಿನಲ್ಲಿ ಅನುದಾನ ಬಿಡುಗಡೆಯಾಗದೆ ಫಲಾನುಭವಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

17. ಶ್ರೀ ಸಿದ್ದು ನ್ಯಾಮಗೌಡ ಅವರು ಬಾಗಲಕೋಟೆ ಜಿಲ್ಲೆಯಲ್ಲಿ ಇನಾಮು ಜಮೀನುಗಳನ್ನು ರೀಗ್ರ್ಯಾಂಟ್ ಮಾಡಿಕೊಳ್ಳಲು ರೈತರಿಗೆ ಮತ್ತೊಂದು ಅವಕಾಶವನ್ನು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

18. ಶ್ರೀಯುತರುಗಳಾದ: ಬಸವರಾಜ್ ರಾಯರೆಡ್ಡಿ, ಬಿ.ಆರ್. ಯಾವಗಲ್, ಪ್ರಿಯಾಂಕ್ ಎಂ. ಖರ್ಗೆ, ಗುರುಪಾಟೀಲ ಶಿರವಾಳ ಮತ್ತು ಡಾ|| ಅಜಯ್ ಸಿಂಗ್ ಅವರುಗಳು ಗದಗ-ವಾಡಿ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಭೂಮಿ ಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

19. ಶ್ರೀ ಕೆ.ಎಸ್. ಮಂಜುನಾಥಗೌಡ ಅವರು ಮಾಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಿಂಡಹಳ್ಳಿ ಮತ್ತು ಕರಿನಾಯಕನಹಳ್ಳಿ ಗ್ರಾಮಗಳ ವ್ಯಾಪ್ತಿಯಲ್ಲಿ ಕೈಗಾರಿಕೆ ಸ್ಥಾಪಿಸಲು ರೈತರ ಜಮೀನನ್ನು ಸ್ವಾಧೀನಪಡಿಸಿಕೊಳ್ಳದೆ ಬಿಟ್ಟುಕೊಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

20. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ಹಾಸನ ಜಿಲ್ಲೆ ಅರಸೀಕೆರೆ ನಗರದಲ್ಲಿ ಹತ್ತಿ ಸೊಸೈಟಿಯನ್ನು ಪುನರ್ ನವೀಕರಣಗೊಳಿಸಿ ಪ್ರಾರಂಭಿಸುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

**ಎಂ.ಗುರುರಾಜ**

ಕಾರ್ಯದರ್ಶಿ

*Raj Nagowda*

**ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

(http://kla.kar.nic.in/assembly/lob/lob.htm)